**ಎಫ್ ಡಿ ಪಿ ನಂಬರ 2/2023 3 ಡಿ ಡಬ್ಲೂ:1 ಶ್ರೀ ವಿರುಪಾಕ್ಷಪ್ಪ**

ದಿನಾಂಕಃ 16/12/2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

ಮುಖ್ಯ ವಿಚಾರಣೆಃ **1** ನೇ ಎದುರುದಾರರ ಪರ ಶ್ರೀ ಸಿ ಎಮ್ ಕೆ ವಕೀಲರಿಂದಃ

1. ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದ ವಿಚಾರಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ, ಬರೆಸಿ ಓದಿಸಿ, ಕೇಳಿ ತಿಳಿದುಕೊಂಡಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿರುತ್ತದೆ.

ಪಾಟೀ ಸವಾಲು ಃ ಅರ್ಜಿದಾರರ ಪರ ಶ್ರೀ ಎಮ್ ಎಸ್ ಡಿ ವಕೀಲರಿಂದ ಃ

2. ನನ್ನ ಮುಖ್ಯ ವಿಚಾರಣೆಯ ಸಾಕ್ಷಿ ಪ್ರಮಾಣ ಪತ್ರವನ್ನು ಬರೆಯಲು ಮಾಹಿತಿಯನ್ನು ವಕೀಲರಿಗೆ ನಾನೆ ಕೊಟ್ಟಿರುತ್ತೇನೆ. ನ್ಯಾಯಾಲಯದ ಆಯುಕ್ತಕರು ಅಳತೆ ಸಂಬಂಧ ನೋಟೀಸ ಕೊಟ್ಟು ಸ್ಥಳದಲ್ಲಿ ಹಾಜರಿರುವಂತೆ ಹೇಳಿದ್ದರು ಎಂದರೆ ಸರಿ. ಮೂಲ ದಾವಾ ಡಿಕ್ರಿ ಪ್ರಕಾರ ಆಯುಕ್ತಕರು ಅಳತೆ ಕಾರ್ಯ ಮಾಡಿದ್ದಾರೆ ಎಂದರೆ ಸರಿ. ಸದರಿ ವರದಿಗೆ ನೀವು ಸಹಿ ಮಾಡಿದ್ದೀರಾ ಎಂದರೆ ಇಲ್ಲ. ಅಳತೆ ದಿನ ನೀವು ದವಾಖಾನೆಯಲ್ಲಿ ಇದ್ದ ಸಂಬಂಧ ದಾಖಲೆ ಹಾಜರು ಪಡಿಸಿದ್ದೀರಾ ಎಂದರೆ ಇಲ್ಲ. ಆಯುಕ್ತಕರು ನ್ಯಾಯಾಲಯದ ಆದೇಶದಂತೆ ಅಳತೆ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ನೀವಲ್ಲದೆ ಬೇರೆ ಯಾರು ಸ್ಥಳದಲ್ಲಿ ಬೇರೆ ಯಾರು ಇದ್ದರು ಎಂದರೆ ಸಾಕ್ಷಿ ನಾನು ಇರಲಿಲ್ಲ. ನನ್ನ ಸಣ್ಣ ಮಕ್ಕಳು ಇದ್ದರು.

ಮರು ವಿಚಾರಣೆ ಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದಂತೆ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

ಸಹಿ ಆಗಿದೆ

ಹಿರಿಯ ದಿವಾಣಿ ನ್ಯಾಯಾಧೀಶರು,ವ

ಪ್ರ.ದ.ನ್ಯಾ.ದಂಡಾಧಿಕಾರಿಗಳು,

ಕುಂದಗೋಳ